**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 424/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.02**

**ದಿನಾಂಕಃ 18.09.2025** **ಸಿಡಬ್ಲ್ಯೂ.02**

| | |
|---|---|
| ಹೆಸರು | ಜಾಕೀರ್ ಹುಸೇನ್ |
| ತಂದೆ ಹೆಸರು | ಜಾಯಿದ್ ಖಾನ್ |
| ವಯಸ್ಸು | 38 ವರ್ಷ |
| ಉದ್ಯೋಗ | ಹೂವಿನ ಅಂಗಡಿ ಕೆಲಸ |
| ವಾಸ ಸ್ಥಳ | ದಾವಣಗೆರೆ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ. 3 ರವರ ಪರಿಚಯವಿಲ್ಲ. ಆರೋಪಿ ಪರಿಚಯವಿಲ್ಲ. ನಾನು ಹೂವಿನ ಅಂಗಡಿಯಲ್ಲಿ ವ್ಯಾಪಾರ ಮಾಡುತ್ತೇನೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯು ಗುರುತಿಸಿದ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಹರಿಹರದ ಶಿವಮೊಗ್ಗ ಸರ್ಕಲ್ ಹತ್ತಿರ ಇರುವ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ನನಗೆ ಓದಲು ಮತ್ತು ಬರೆಯಲು ಬರುವುದಿಲ್ಲ. ಯಾವ ವಿಚಾರಕ್ಕೆ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನಾನು ಯಾವುದೇ ಅಧಿಕಾರಿಗಳಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 07.02.2023 ರಂದು ನಾನು ಆಕಾಶ್ ರೈಸ ಮಿಲ್ ಇಂಡಸ್ಟ್ರಿ, ಮಿಟ್ಲಕಟ್ಟೆ ಯಲ್ಲಿ ಕೆಲಸ ಮಾಡುತ್ತಿದ್ದೆನು ಎಂದರೆ ಸರಿಯಲ್ಲ. ಚಾಸಾ.1 ರವರು ಸ್ಥಳಕ್ಕೆ ಬೇಟಿ ನೀಡಿದಾಗ ಅವರಿಗೆ ನಾನು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಮೃತ ಸಂದೀಪ ರವರಿಗೆ ವಿದ್ಯುತ್ ತಗಲಿ ಘಟನೆ ಸಂಬವಿಸಿದಾಗ ನಾನು ಸ್ಥಳಕ್ಕೆ ಹೋಗಿ ನೋಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಹ್ೋಗಿ ನೊಡಿದಾಗ ಮಧುಕುಮಾರ, ರಾಜು ಮತ್ತು ಶ್ರೀನಿವಾಸ ರವರು ಮೃತ ಸಂದೀಪನನ್ನು ಎತ್ತಿಕೊಂಡು ಬರುತ್ತಿದ್ದರು ಎಂದರೆ ನನಗೆ ಗೊತ್ತಿಲ್ಲ. ವಿಚಾರಿಸಿದಾಗ ಕಿಟಕಿಯಿಂದ ವಿದ್ಯುತ್ ಪ್ರವಹಿಸಿ ಮೃತ

ಸಂದೀಪನಿಗೆ ತಿಳಿದು ಬಂದಿರುತ್ತದೆ ಎಂದರೆ ಸರಿಯಲ್ಲ. ಆಗ ನಾನು ಸಂದೀಪನನ್ನು ವಾಹನದಲ್ಲಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ ಎಂದರೆ ಸರಿಯಲ್ಲ. ಆಸ್ಪತ್ರೆಯಲ್ಲಿ ಸಂದೀಪ ಈಗಾಗಲೇ ಮೃತನಾಗಿರುವ ಬಗ್ಗೆ ತಿಳಿಸಿದ್ದರು ಎಂದರೆ ಸರಿಯಲ್ಲ. ಆಸ್ಪತ್ರೆಗೆ ನನ್ನೊಂದಿಗೆ ಮಧು ಕುಮಾರ ಮತ್ತು ರಾಜು ಬಂದಿದ್ದರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರವಾಗಿ ನಾನು ಚಾಸಾ.1ರ ವರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಗುರುತಿಸಲು ನಿರಾಕರಿಸಿದ ಹೇಳಿಕೆಯನ್ನು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿದೆ. ಪ್ರಕರಣದ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

**ಇರುವುದಿಲ್ಲ.**

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ